ಆ) ಬಿಡುಗಡೆ ಮಾಡಿದ ಹಣ ಪೂರ್ಣ ಖರ್ಚಾಗಿದೆ.

ಇ) ತಾಲ್ಲೂಕುವಾರು ಕಾಮಗಾರಿಗಳ ವಿವರ ಕೆಳಗಿನಂತಿದೆ.

	ತಾಲ್ಲೂಕು	ಪ್ರಗತಿಯಲ್ಲಿರುವ ಕಾಮಗಾರಿಗಳು ತೆಗೆದುಕೊಂಡಿದ್ದು
1.	ಬೀದರ್	46
2.	ಔರಾದ್	108
3.	ಭಾಲ್ಕಿ	80
4.	ಬಸವಕಲ್ಯಾಣ	84
5.	ಹುಮ್ನಾಬಾದ್	66
6.	ಕೆ.ಇ.ಬಿ. (ತಾಲ್ಲೂಕ್ ವಿವರಗಳು ಲಭ್ಯವಿಲ್ಲ)	146
	ಒಟ್ಟು	**530**

ಈ) ಇಲ್ಲ

ಉ) ನಿರ್ದಿಷ್ಟ ಪ್ರಸಂಗಗಳು ಗಮನಕ್ಕೆ ಬಂದಲ್ಲಿ ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದು.

ಉತ್ತರ ಕನ್ನಡ ಜಿಲ್ಲೆಯ ಅಘನಾಶಿನಿ ಯೋಜನೆ ಕುರಿತು

114 - ಶ್ರೀ ಗೋಪಾಲ ಮುಕುಂದ ಕಾನಡೆ (ಸಿರ್ಸಿ) : ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಉತ್ತರ ಕನ್ನಡ ಜಿಲ್ಲೆಯ ಅಘನಾಶಿನಿ ಯೋಜನೆಯನ್ನು ಕೈಬಿಡಲು ಸರ್ಕಾರ ಆಲೋಚಿಸಿದೆಯೇ?

ಶ್ರೀ ವೀರಪ್ಪ ಮೊಯಿಲಿ (ಮುಖ್ಯ ಮಂತ್ರಿಗಳು) :

ಅ) ಇಲ್ಲ

ಹಾಲಿನ ಶೇಖರಣೆಗೆ ರಜಾ ಹಾಗೂ ಶೇಖರಣಾ ಧಾರಣೆ ಕಡಿಮೆ ಮಾಡಿರುವ ಬಗ್ಗೆ

115 - ಶ್ರೀ ಜೆ.ಸಿ. ಮಾಧುಸ್ವಾಮಿ (ಚಿಕ್ಕನಾಯಕನಹಳ್ಳಿ) : ಮಾನ್ಯ ಮುಖ್ಯ ಮಂತ್ರಿಗಳು, ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಇತ್ತೀಚಿನ ದಿನಗಳಲ್ಲಿ ಹಾಲಿನ ಶೇಖರಣಾ ಧಾರಣೆ ಕಡಿಮೆ ಮಾಡಿರುವುದು ಹಾಗೂ ಹಾಲು ಶೇಖರಣಾ ರಜೆ ಕೊಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಇದು ಯೋಜನೆಯ ಮೂಲ ರೂಪರೇಷೆಗೆ ವಿರುದ್ಧವಲ್ಲವೇ?

ಇ) ಇದರಿಂದ ರೈತರಿಗೆ ಉಂಟಾಗಿರುವ ನಷ್ಟವನ್ನು ತುಂಬಿಕೊಡಲು ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಎಂ. ವೀರಪ್ಪ ಮೊಯಿಲಿ (ಮುಖ್ಯ ಮಂತ್ರಿಗಳು) :

ಅ) ತುಮಕೂರು ಹಾಲು ಒಕ್ಕೂಟ ಮಾತ್ರ ಹಾಲು ರಜೆಯನ್ನು ಘೋಷಿಸಿದೆ.

ಆ) ಈ ಹಿಂದೆ ಹಾಲು ಉತ್ಪಾದಕರ ಹಿತದೃಷ್ಟಿಯಿಂದ ಹಾಲು ರಚೆಯನ್ನು ನೀಡಲಾಗಿದ್ದು ಇದನ್ನು ಮುಂಚಿತವಾಗಿ ಹಾಲು ಉತ್ಪಾದಕರಿಗೆ ತಿಳಿಸಲಾಗುತ್ತಿದೆ.

ಈ) ಉದ್ಭವಿಸುವುದಿಲ್ಲ.

ಜಿಲ್ಲಾ ಪರಿಷತ್ತಿನವರಿಂದ ಆರಂಭವಾದ ಕೆಲವು ಗ್ರಾಮಾಂತರ ಪಶುವೈದ್ಯ ಶಾಲೆಗಳನ್ನು ಸ್ಥಗಿತ.

117 - ಶ್ರೀ ಜೆ.ಸಿ. ಮಾಧುಸ್ವಾಮಿ (ಚಿಕ್ಕನಾಯಕನಹಳ್ಳಿ) : ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) *ಜಿಲ್ಲಾ ಪರಿಷತ್ತಿನವರು ಗ್ರಾಮಾಂತರ ಪಶುವೈದ್ಯ ಶಾಲೆಗಳನ್ನು ಆರಂಭಿಸಿ ಅವುಗಳಲ್ಲಿ ಕೆಲವನ್ನು ಸ್ಥಗಿತಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿವೆಯೇ?*

ಆ) *ಇದು ಅತ್ಯಂತ ಜರೂರಿ ಕಾರ್ಯಕ್ರಮವಾಗಿದ್ದು ಸ್ಥಗಿತಗೊಳಿಸಿರುವುದರಿಂದ ಜಾನುವಾರುಗಳಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಇ) *ಆದ್ದರಿಂದ ಮುಂದುವರಿಸಿ ಜಾನುವಾರುಗಳಿಗೆ ಸೇವೆ ಸಲ್ಲಿಸಲಾಗುವುದೇ?*

ಶ್ರೀ ಎಂ. ವೀರಪ್ಪ ಮೊಯಿಲಿ (ಮುಖ್ಯ ಮಂತ್ರಿಗಳು) :

ಅ) ಇಲ್ಲ.

ಆ) ಇಲ್ಲ

ಇ) ಉದ್ಭವಿಸುವುದಿಲ್ಲ.

ಹಾಸನ ಜಿಲ್ಲೆಯ ಕಾಚೇನಹಳ್ಳಿ ಏತ ನೀರಾವರಿ ಯೋಜನೆ

156 - ಶ್ರೀ ಜಿ. ಪುಟ್ಟಸ್ವಾಮಿಗೌಡ (ಹೊಳೇನರಸೀಪುರ) : ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) *ಹಾಸನ ಜಿಲ್ಲೆಯ ದಂಡಿಗನ ಹಳ್ಳಿ ಹೋಬಳಿ ಕಾಚೇನಹಳ್ಳಿ ಏತನೀರಾವರಿ ಯೋಜನೆಗೆ ಸಂಬಂಧಿಸಿದಂತೆ ಕರೆಯಲಾಗಿದ್ದ ಟೆಂಡರನ್ನು ರದ್ದು ಪಡಿಸಲು ಕಾರಣವೇನು?*

ಆ) *ನದಿ ನೀರನ್ನು ಉಪಯೋಗಿಸಲು ಸರ್ಕಾರವು ಹೆಚ್ಚು ಆಸಕ್ತಿ ವಹಿಸಿದ್ದರೂ ಕೂಡ ವಿಳಂಬ ಮಾಡುತ್ತಿರಲು ಕಾರಣವೇನು?*

ಶ್ರೀ ಎಂ. ವೀರಪ್ಪ ಮೊಯಿಲಿ (ಮುಖ್ಯ ಮಂತ್ರಿಗಳು) :

ಅ) ಹಾಸನ ಜಿಲ್ಲೆ ದಂಡಿಗನಹಳ್ಳಿ ಹೋಬಳಿ ಕಾಚೇನಹಳ್ಳಿ ಏತನೀರಾವರಿ ಯೋಜನೆಗೆ ಸಂಬಂಧಿಸಿದಂತೆ ಕರೆಯಲಾಗಿದ್ದ ಟೆಂಡರನ್ನು ರದ್ದುಪಡಿಸಿರುವುದಿಲ್ಲ.

ಆ) ಕಾಚೇನಹಳ್ಳಿ ಏತನೀರಾವರಿ ಯೋಜನೆಯನ್ನು ಶೀಘ್ರವಾಗಿ ಕಾರ್ಯಗತಗೊಳಿಸಲು ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ.

ರಾಜ್ಯದಲ್ಲಿ ವಿಧಾನಸಭಾ ಕ್ಷೇತ್ರಗಳ ಪುನರ್ ವಿಂಗಡಣೆ

944 - ಶ್ರೀ ಕೆ. ಹರ್ಷಕುಮಾರಗೌಡ (ಚಾಮರಾಜ) : ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) *ರಾಜ್ಯದಲ್ಲಿ ಲೋಕಸಭಾ ಮತ್ತು ವಿಧಾನಸಭಾ ಕ್ಷೇತ್ರಗಳ ಪುನರ್ ವಿಂಗಡಣೆಯ ಕಾರ್ಯ ಕೈಗೊಳ್ಳಲು ರಾಜ್ಯ ಸರ್ಕಾರವು ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಿದೆಯೇ?*

ಆ) *ಹಾಗಿದ್ದಲ್ಲಿ ಮೀಸಲು ಕ್ಷೇತ್ರಗಳನ್ನು ಬದಲಾಯಿಸಲು ಸರ್ಕಾರವು ಸೂಚಿಸಿದೆಯೇ?*